# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 591 |
| ಸದಸ್ಯರ ಹೆಸರು | : | ಶ್ರೀ ಡಾ: ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದ ಗ್ರಾಮ ಪಂಚಾಯತ್ ಕಛೇರಿಯಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ/ ಖಾಯಂ ಸಿಬ್ಬಂದಿಗೆ ಒದಗಿಸಿರುವ ಸೇವಾ ಸೌಲಭ್ಯಗಳು ಯಾವುವು;</td><td>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112ರಂತೆ ಗ್ರಾಮ ಪಂಚಾಯಿತಿಯು ಮಂಜೂರಾದ ಹುದ್ದೆಗಳಿಗೆ ಪ್ರಕರಣ 113 ರಂತೆ ನೇಮಕಾತಿ ಮಾಡಿಕೊಂಡು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆದುಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯಿತಿಯ ಖಾಯಂ ನೌಕರರಾಗಿರುತ್ತಾರೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರಚಿಸಿ, ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.</td></tr>
<tr><td>(ಆ)</td><td>ಪಂಚಾಯತ್ ರಾಜ್ ಇಲಾಖೆಯಲ್ಲಿ ಹಗಲು-ರಾತ್ರಿ ಗ್ರಾಮಗಳಿಗೆ/ ಗ್ರಾಮದ ನಿವಾಸಿಗಳಿಗೆ ಹಲವಾರು ಸೇವೆಗಳನ್ನು ಒದಗಿಸುತ್ತಿರುವ ಬಿಲ್ ಕಲೆಕ್ಟರ್/ ಕ್ಲರ್ಕ್/ ಡಾಟಾ ಎಂಟ್ರಿ ಆಪರೇಟರ್/ ವಾಟರ್ ಆಪರೇಟರ್ ಮುಂತಾದ ಸಿಬ್ಬಂದಿಗಳು ಕನಿಷ್ಠ ವೇತನ ಮತ್ತು ವೈದ್ಯಕೀಯ ಸೌಲಭ್ಯಗಳಿಂದ ವಂಚಿತರಾಗಿರುವುದಕ್ಕೆ ಕೈಗೊಂಡ ಕ್ರಮಗಳೇನು;</td><td>1. ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಪಾವತಿಸಲಾಗುತ್ತಿದೆ. ಅದರ ವಿವರ ಕೆಳಕಂಡಂತಿದೆ.<br><br><table><tr><th>ಕ್ರ ಸಂ</th><th>ಪದನಾಮ</th><th>ಕನಿಷ್ಠ ವೇತನ ನೀಡುತ್ತಿರುವ ವಿವರ (ರೂ.ಗಳಲ್ಲಿ)</th><th>ವ್ಯತ್ಯಾಸ ವಾಗುವ ತುಟ್ಟಿಭತ್ಯೆ (ರೂ.ಗಳಲ್ಲಿ)</th><th>ಒಟ್ಟು (ರೂ.ಗಳಲ್ಲಿ)</th></tr>
<tr><td>1</td><td>ಬಿಲ್ ಕಲೆಕ್ಟರ್</td><td>15,196.72</td><td>2223.60</td><td>17420.32</td></tr>
<tr><td>2</td><td>ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್</td><td>15,196.72</td><td>2223.60</td><td>17420.32</td></tr>
<tr><td>3</td><td>ವಾಟರ್ ಆಪರೇಟರ್</td><td>13,509.32</td><td>2223.60</td><td>15732.92</td></tr>
<tr><td>4</td><td>ಅಟೆಂಡಂಟ್</td><td>12,873.52</td><td>2223.60</td><td>15097.12</td></tr>
<tr><td>5</td><td>ಕ್ಲೀನರ್ಸ್</td><td>16,019.52</td><td>2223.60</td><td>18243.12</td></tr></table></td></tr>
</table>

| | | |
|---|---|---|
| | | 2. ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾಧಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಟಿಯಿಂದ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿಯ ಈ ಕೆಳಕಂಡ ವಿಮಾ ಪಾಲಿಸಿಗಳನ್ನು ಕಡ್ಡಾಯವಾಗಿ ಮಾಡಿಸಲು ಮತ್ತು ಸಂಬಂಧಿಸಿದ ಸಿಬ್ಬಂದಿಗಳ ವೇತನದ ಬ್ಯಾಂಕ್ ಖಾತೆಗೆ ಲಿಂಕ್ ಮಾಡಿಸಿ, ವಾರ್ಷಿಕವಾಗಿ ಕಟಾವಣೆ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ.<br><br>1) ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ<br>2) ಪ್ರಧಾನ ಮಂತ್ರಿ ಸುರಕ್ಷಾ ಜ್ಯೋತಿ ಭೀಮಾ ಯೋಜನೆ<br>3) ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಫರ್ಸನಲ್ ಆಕ್ಸಿಡೆಂಟ್ ಇನ್‌ಶ್ಯೂರೆನ್ಸ್<br><br>3. 2020 ರ ಕೋವಿಡ್ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಕೋವಿಡ್ ನಿಯಂತ್ರಣಕ್ಕಾಗಿ ಶ್ರಮಿಸುತ್ತಿದ್ದ ವೇಳೆ ಕೋವಿಡ್ ಸೋಂಕಿನಿಂದ ಮೃತಪಟ್ಟ ಸಂದರ್ಭದಲ್ಲಿ ಸರ್ಕಾರವು ಅವರಿಗೆ 30 ಲಕ್ಷ ರೂ ಪರಿಹಾರ ಘೋಷಿಸಿತ್ತು. ಘೋಷಿಸಲಾದ ಪರಿಹಾರ ಪಾವತಿಗೆ ಪ್ರತ್ಯೇಕ ಲೆಕ್ಕ ಶೀರ್ಷಿಕೆ ಇರಲಿಲ್ಲ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತ್ ನೌಕರರು ಕೋವಿಡ್-19 ಕರ್ತವ್ಯ ನಿರ್ವಹಿಸುತ್ತಿದ್ದಾಗ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮರಣ ಹೊಂದಿದ್ದಲ್ಲಿ ಅವರ ಕುಟುಂಬದವರಿಗೆ 30 ಲಕ್ಷ ರೂ. ಪರಿಹಾರ ನೀಡಲು ಅಥವಾ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಅನಾರೋಗ್ಯಗೊಂಡಲ್ಲಿ ಸದರಿ ಚಿಕಿತ್ಸೆಗಾಗಿ ತಗಲುವ ವೈದ್ಯಕೀಯ ವೆಚ್ಚ ಭರಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಶ್ವಾಸನೆ ನಿಧಿಯನ್ನು ಸ್ಥಾಪಿಸಿ ಪರಿಹಾರ ನೀಡಲು ತಿಳಿಸಲಾಗಿದೆ.<br><br>4. ಗ್ರಾಮ ಪಂಚಾಯತಿ ನೌಕರರಿಗೆ ತೀವ್ರ ಸ್ವರೂಪದ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್, ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್, ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಾಯಿಲೆಗಳಿಗೆ ತುತ್ತಾದಲ್ಲಿ ವೈದ್ಯಕೀಯ ವೆಚ್ಚ ಗರಿಷ್ಠ ರೂ. 50,000/- ಗಳನ್ನು ಒಂದು ಬಾರಿ ಪಾವತಿಸಲು ಆದೇಶಿಸಲಾಗಿದೆ. |
| (ಇ) | ಗ್ರಾಮ ಪಂಚಾಯಿತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ಸೇವಾ ಭದ್ರತೆ, ಸಿ ಮತ್ತು ಡಿ ದರ್ಜೆ ನೌಕರರನ್ನಾಗಿ ಮೇಲ್ದರ್ಜೆಗೇರಿಸಲು ನೇಮಕಾತಿ ನಿಯಮಗಳಿಗೆ (ಸಿ ಅಂಡ್ ಆರ್) ಮತ್ತು ಕೈಗೊಂಡ ಕ್ರಮಗಳು ಯಾವುವು | ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರಚಿಸಲಾಗಿದೆ.<br><br>ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ / ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಸೇವೆಯೊಳಗಿನ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಿಗನುಸಾರವಾಗಿ ಬಿಲ್ ಕಲೆಕ್ಟರ್ / ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ನೌಕರರಿಂದ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. |

| | | |
|---|---|---|
| (ಈ) | ಈ ಸಿಬ್ಬಂದಿಗಳಿಗೆ ಸರ್ಕಾರದ ನಿಯಮಗಳಂತೆ ನೀಡಬೇಕಾದ ವೇತನ ಶ್ರೇಣಿ, ವೈದ್ಯಕೀಯ ಸೌಲಭ್ಯಗಳು ಮತ್ತು ಇನ್ನಿತರ ಸೌಲಭ್ಯಗಳನ್ನು ಜಾರಿಗೊಳಿಸಲು ಯಾವಾಗ ಕ್ರಮ ಕೈಗೊಳ್ಳಲಾವುದು? (ವಿವರ ನೀಡುವುದು) | 1) ಗ್ರಾಮ ಪಂಚಾಯಿತಿ ನೌಕರರಿಗೆ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆ ಮತ್ತು ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ನೀಡಲಾಗುತ್ತದೆ.<br><br>2) ಗ್ರಾಮ ಪಂಚಾಯಿತಿ ಸಿಬ್ಬಂದಿಯು ಸೇವೆಯಲ್ಲಿದ್ದಾಗ ಮರಣ ಹೊಂದಿದಲ್ಲಿ ಅವರ ನ್ಯಾಯಬದ್ಧ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br><br>3) ಪ್ರಸ್ತುತ ಸೇವೆಯಿಂದ ನಿವೃತ್ತಿಯಾಗುವ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.<br><br>4) ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಹಾಗೂ ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10.000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಅವಕಾಶ ಕಲ್ಪಿಸಲಾಗಿದೆ.<br><br>5) ಬಿಲ್ ಕಲೆಕ್ಟರ್ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್/ ಅಟೆಂಡೆಂಟ್/ ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಸೇವಾ ಹಿರಿತನದ ವೇತನ ನಿಗಧಿಪಡಿಸಲು ಮತ್ತು ವೇತನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಗ್ರಾಅಪ 665 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.